# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಾರನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಮಂಗಳವಾರ, ದಿನಾಂಕ: 11ನೇ ಡಿಸೆಂಬರ್, 2018**

**(ಸಮಯ: ಬೆಳಗ್ಗೆ 10.00 ಗಂಟೆಗೆ)**

******

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ)

## 03. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದಿಂದೀಚೆಗೆ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

**ಅ) ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ** ಅವರು ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ನಡುವೆ ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ 4 ಟಿಎಂಸಿ ನೀರನ್ನು ಹಂಚಿಕೆ ಮಾಡುವುದಕ್ಕೆ ಸಂಬಂಧಪಟ್ಟಂತೆ ಶಾಶ್ವತ ಒಡಂಬಡಿಕೆ ಮಾಡಿಕೊಳ್ಳುವ ಕುರಿತು **ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀಯುತರುಗಳಾದ ಪುಟ್ಟಣ್ಣ, ಅರುಣ ಶಹಾಪೂರ, ಐವನ್ ಡಿ'ಸೋಜಾ, ಕೆ. ಹರೀಶ್ ಕುಮಾರ್** ಅವರುಗಳು ದಿನಾಂಕ:01.04.2006ರ ನಂತರ ನೇಮಕಾತಿ ಹೊಂದಿರುವ ಸರ್ಕಾರಿ ನೌಕರರುಗಳಿಗೆ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಕುರಿತು **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

..2

**ಇ) ಶ್ರೀ ಐವನ್ ಡಿ'ಸೋಜಾ** ಅವರು ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಕ್ರೀಡಾ ನೀತಿಯನ್ನು ಜಾರಿಗೆ ತರಲು ಮತ್ತು ಕ್ರೀಡೆಯಲ್ಲಿ ಭಾಗವಹಿಸುವವರಿಗೆ ಉದ್ಯೋಗಗಳನ್ನು ಮೀಸಲಿಡುವಂತೆ ಸರ್ಕಾರವು ಕ್ರಮಕೈಗೊಳ್ಳುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

## ೦೫. ನಿಯಮ ೩೩೦ರ ಮೇರೆಗೆ

**ಅ) ಶ್ರೀಯುತರುಗಳಾದ ಕೆ.ಸಿ. ಕೊಂಡಯ್ಯ ಮತ್ತು ಶರಣಪ್ಪ ಮಟ್ಟೂರ** ಅವರುಗಳು ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ 2013-14ನೇ ಸಾಲಿನಿಂದ ಇಲ್ಲಿಯವರೆಗೆ ಆಯವ್ಯಯದಲ್ಲಿ ಅನುದಾನ ಘೋಷಣೆ ಮಾಡಲಾಗಿದ್ದರೂ ಬಿಡುಗಡೆ ಮಾಡದಿರುವ ಹಾಗೂ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಅನುದಾನದಲ್ಲಿ ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನ ಹೊರತುಪಡಿಸಿ ಮಂಡಳಿಗೆ ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸುವುದು.

**ಆ) ಡಾ:ವೈ.ಎ. ನಾರಾಯಣಸ್ವಾಮಿ** ಅವರು ರಾಜ್ಯ ಸರ್ಕಾರಿ ನೌಕರರು ಕರ್ನಾಟಕ ಸರ್ಕಾರ ವಿಮಾ ಇಲಾಖೆಗೆ ಕಟ್ಟುತ್ತಿರುವ ವಂತಿಗೆಯ ಮಾಹಿತಿಯು ಗಣಕೀಕೃತಗೊಂಡಿಲ್ಲದ ಕಾರಣ ಸರಿಯಾದ ಸಮಯಕ್ಕೆ ವಿಮಾ ಬಾಂಡ್ ಪಡೆಯುವಲ್ಲಿ 5 ರಿಂದ 6 ತಿಂಗಳ ಕಾಲ ವಿಳಂಬವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಇ) ಶ್ರೀ ಎನ್. ರವಿಕುಮಾರ್** ಅವರು ಬೆಂಗಳೂರು ನಗರದ ಮಾರತ್‌ಹಳ್ಳಿ, ಜಕ್ಕಸಂದ್ರ, ಸರ್ಜಾಪುರ, ಬೆಳ್ಳಂದೂರು, ದೇವರಬೀಸನ ಹಳ್ಳಿ, ಕಾಡುಬೀಸನ ಹಳ್ಳಿ ಮುಂತಾದ ಕಡೆಗಳಲ್ಲಿ ಅಕ್ರಮವಾಗಿ ಪ್ರವೇಶಿಸಿ ಬಾಂಗ್ಲಾದೇಶಿಯರ ಕ್ಯಾಂಪ್‌ಗಳಲ್ಲಿ ನೆಲೆಸಿರುವ ರೊಹಿಂಗ್ಯರು ಹಲ್ಲೆ, ದರೋಡೆ, ಕಳ್ಳತನ ಮುಂತಾದ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ಹಿನ್ನಲೆಯಲ್ಲಿ ಸಾರ್ವಜನಿಕರು ಆತಂಕಕ್ಕೀಡಾಗಿರುವ ಬಗ್ಗೆ ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ (ಪ್ರ)**

---